ಕರ್ನಾಟಕ ಸರ್ಕಾರ

**ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿಕ್ಕಬಳ್ಳಾಪುರ ಜಿಲ್ಲೆ, ಚಿಕ್ಕಬಳ್ಳಾಪುರ.**

**Office of the Deputy Commissioner, Chikkaballapura District, Chikkaballapura**

Telephone: 08156-277001, Fax: 08156-277002, e.mail: deo.ckbpur@gmail.com/ dc-ckbpur-ka@gov.in

---

**ವಿಷಯ:** ಚಿಕ್ಕಬಳ್ಳಾಪುರ ತಾಲ್ಲೂಕಿನ ಪ್ರಸಿದ್ಧ ಪ್ರವಾಸಿ ತಾಣವಾದ ನಂದಿಗಿರಿಧಾಮಕ್ಕೆ ದಿನಾಂಕ: 31/12/2025ರ ಮಧ್ಯಾಹ್ನ 2:00 ಗಂಟೆಯಿಂದ ದಿನಾಂಕ: 01/01/2026ರ ಬೆಳಿಗ್ಗೆ 10:00 ಗಂಟೆಯವರೆಗೆ ಪ್ರವಾಸಿಗರಿಗೆ ಮತ್ತು ವಾಹನಗಳ ಪ್ರವೇಶವನ್ನು ನಿಷೇಧಿಸುವ ಕುರಿತು.

**ಉಲ್ಲೇಖ:**
1. ಪೊಲೀಸ್ ಅಧೀಕ್ಷಕರು, ಚಿಕ್ಕಬಳ್ಳಾಪುರ ಜಿಲ್ಲೆ ರವರ ಪತ್ರದ ಸಂಖ್ಯೆ: ಡಿಎಸ್‌ಬಿ/ಸಿಬಿಪಿ/ಸಿಸಿ/619/2025ರ ದಿನಾಂಕ: 20/12/2025.
2. ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ, ಹೋಟಲ್ ಮಯೂರ ಪೈನ್‌ಟಾಪ್, ನಂದಿ ಗಿರಿಧಾಮ, ಚಿಕ್ಕಬಳ್ಳಾಪುರ ರವರ ಪತ್ರದ ಸಂಖ್ಯೆ: KSTDC/HMPN/NANDIHILLS/2025-26/170ರ ದಿನಾಂಕ: 02/12/2025.

*****

**ಪ್ರಸ್ತಾವನೆ:-**

2026ನೇ ಹೊಸವರ್ಷ ಆಚರಣೆ ಪ್ರಯುಕ್ತ ಪ್ರೇಕ್ಷಣೀಯ ಹಾಗೂ ಐತಿಹಾಸಿಕ ಸ್ಥಳವಾದ ನಂದಿಗಿರಿಧಾಮ ಠಾಣಾ ವ್ಯಾಪ್ತಿಯ ನಂದಿಬೆಟ್ಟಕ್ಕೆ ಪ್ರತಿ ವರ್ಷದಂತೆ 2026ನೇ ಹೊಸ ವರ್ಷ ಆಚರಣೆ ಮಾಡುವ ಸಲುವಾಗಿ ಹೊರರಾಜ್ಯ ಮತ್ತು ಹೊರ ಜಿಲ್ಲೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಪ್ರವಾಸಿಗರು ನಂದಿಗಿರಿಧಾಮಕ್ಕೆ ಆಗಮಿಸುವ ಸಾಧ್ಯತೆಗಳಿರುತ್ತದೆ. ಅಂಕಿ ಅಂಶಗಳ ಪ್ರಕಾರ ನಂದಿಗಿರಿಧಾಮಕ್ಕೆ ವಿಶೇಷ ದಿನಗಳಲ್ಲಿ (ಭಾನುವಾರ, ಶನಿವಾರ ಹಾಗೂ ರಜೆ ದಿನಗಳಲ್ಲಿ) ಸುಮಾರು 16-18 ಸಾವಿರ ಪ್ರವಾಸಿಗರು ಹಾಗೂ 3000-3500 ದ್ವಿಚಕ್ರವಾಹನಗಳು ಹಾಗೂ 1500-1700 ನಾಲ್ಕು ಚಕ್ರ(ಕಾರು) ಇತರೆ ವಾಹನಗಳು ಆಗಮಿಸುವದರಿಂದ ಅಧಿಕಾರಿ & ಸಿಬ್ಬಂಧಿಯವರು ಖುದ್ದಾಗಿ ಹಾಜರಿದ್ದು ವಾಹನ ಸಂಚಾರ ನಿಯಂತ್ರಣ ಮಾಡಬೇಕಾಗುತ್ತದೆ. ಸಾಮಾನ್ಯ ದಿನಗಳಲ್ಲಿ ಸುಮಾರು 5000-6000 ಸಾವಿರ ಪ್ರವಾಸಿಗರು ಹಾಗೂ 1000-1500 ದ್ವಿಚಕ್ರವಾಹನಗಳು ಹಾಗೂ 500-700 ನಾಲ್ಕು ಚಕ್ರ(ಕಾರು)ಇತರೆ ವಾಹನಗಳು ಆಗಮಿಸುತ್ತಿರುತ್ತವೆ. ನಂದಿಗಿರಿಧಾಮಕ್ಕೆ ಹೋಗಲು ಮತ್ತು ಬರಲು ಒಂದೇ ರಸ್ತೆ ಇರುವುದರಿಂದ ವಾಹನ ದಟ್ಟಣೆ ಹೆಚ್ಚಾಗಿರುತ್ತದೆ. ಹೊಸವರ್ಷದ ಆಚರಣೆ ಮಾಡುವ ಸಲುವಾಗಿ ನಿರೀಕ್ಷೆಗೆ ಮೀರಿ 25-30 ಸಾವಿರ ಪ್ರವಾಸಿಗರು ಹಾಗೂ 5-6 ಸಾವಿರ ವಾಹನಗಳು ಆಗಮಿಸುವುದರಿಂದ ಕಡಿದಾದ ತಿರುವುಗಳಿಂದ ಕೂಡಿದ ರಸ್ತೆಗಳಲ್ಲಿ ವಾಹನ ಮತ್ತು ಪ್ರವಾಸಿಗರನ್ನು ನಿಯಂತ್ರಿಸುವುದು ಅತಿ ಕಷ್ಟಕರವಾಗಿರುತ್ತದೆ ಹಾಗೂ ಅಪಘಾತಗಳಾಗುವ ಸಾಧ್ಯತೆಗಳು ಹೆಚ್ಚಾಗಿರುತ್ತದೆ. ಹೊಸ ವರ್ಷಾಚರಣೆಯ ಪ್ರಯುಕ್ತ ಹೊರಗಡೆಯಿಂದ ಬರುವ ಸಾರ್ವಜನಿಕರು ರಾತ್ರಿ ವೇಳೆಯಲ್ಲಿ ಮಧ್ಯಪಾನ & ಧೂಮಪಾನ ಮಾಡಿ ಅಸಭ್ಯ ವರ್ತನೆಗಳನ್ನು ಮಾಡಿ ಈ ಆಚರಣೆಯಲ್ಲಿ ಮಹಿಳೆಯರು & ಹುಡುಗಿಯರು ಭಾಗವಹಿಸುವುದರಿಂದ ಕುಡಿದ ಅಮಲಿನಲ್ಲಿ ಅಸಭ್ಯವಾಗಿ ಕುಣಿದಾಡುವುದು, ಕೂಗಾಡುವುದು ಇತರೆ ಪ್ರವಾಸಿಗರಿಗೆ ತೊಂದರೆ ನೀಡುವುದು. ಬೆಟ್ಟದ ಮೇಲಿನ ನಿಷೇದಿತ ಅಪಾಯಕರ ಸ್ಥಳಗಳಿಗೆ ಹೋಗುವ ಸಾಧ್ಯತೆಗಳು ಇರುತ್ತವೆ. ಈ ಸಮಯದಲ್ಲಿ ಹೆಚ್ಚಿನ ಸಿಬ್ಬಂಧಿಯನ್ನು ನಿಯೋಜನೆ ಮಾಡಿದರೂ ಸಹ ಯಾವುದೇ ಪ್ರಯೋಜನೆಗಳು ಸಾಧ್ಯವಾಗುವುದಿಲ್ಲ. ಆದ್ದರಿಂದ ಮುನ್ನೆಚ್ಚರಿಕಾ ಕ್ರಮವಾಗಿ ಚಿಕ್ಕಬಳ್ಳಾಪುರ ತಾಲ್ಲೂಕಿನ ಪ್ರಸಿದ್ಧ ಪ್ರವಾಸಿ ತಾಣವಾದ ನಂದಿಗಿರಿಧಾಮಕ್ಕೆ ದಿನಾಂಕ: 31/12/2025ರ ಮಧ್ಯಾಹ್ನ 2:00 ಗಂಟೆಯಿಂದ ದಿನಾಂಕ: 01/01/2026ರ ಮಧ್ಯಾಹ್ನ 2:00 ಗಂಟೆಯವರೆಗೆ ನಂದಿಬೆಟ್ಟಕ್ಕೆ ಪ್ರವಾಸಿಗರು ಹಾಗೂ ವಾಹನಗಳನ್ನು ಪ್ರವೇಶ ಮಾಡದಂತೆ ನಿಷೇಧಿಸಲು ಆದೇಶ ಮಾಡುವಂತೆ ಪೊಲೀಸ್ ಅಧೀಕ್ಷಕರು, ಚಿಕ್ಕಬಳ್ಳಾಪುರ ಜಿಲ್ಲೆ ರವರು ಉಲ್ಲೇಖ(1)ರಂತೆ ಕೋರಿರುತ್ತಾರೆ.

ಹೊಸವರ್ಷ ಆಚರಣೆ ಪ್ರಯುಕ್ತ ಪ್ರೇಕ್ಷಣೀಯ ಹಾಗೂ ಐತಿಹಾಸಿಕ ಸ್ಥಳವಾದ ನಂದಿಗಿರಿಧಾಮ ಠಾಣಾ ವ್ಯಾಪ್ತಿಯ ನಂದಿಬೆಟ್ಟಕ್ಕೆ ಪ್ರತಿ ವರ್ಷದಂತೆ 2026ನೇ ಹೊಸ ವರ್ಷ ಆಚರಣೆ ಸಲುವಾಗಿ ಪ್ರವಾಸಿಗರಿಗೆ ಮತ್ತು ವಾಹನಗಳ ಪ್ರವೇಶವನ್ನು ನಿಷೇಧಿಸಲಾಗುವುದರಿಂದ ಮುಂಗಡವಾಗಿ ಅತಿಥಿ ಕೊಠಡಿಗಳನ್ನು ಕಾಯ್ದಿರಿಸಿರುವ ಪ್ರವಾಸಿಗರಿಗೆ ವಿನಾಯ್ತಿ ನೀಡುವಂತೆ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ, ಹೋಟಲ್ ಮಯೂರ ಪೈನ್‌ಟಾಪ್, ನಂದಿ ಗಿರಿಧಾಮ, ಚಿಕ್ಕಬಳ್ಳಾಪುರ ರವರು ಉಲ್ಲೇಖ(2)ರಂತೆ ಕೋರಿರುತ್ತಾರೆ.

ಉಲ್ಲೇಖಿತ ಪತ್ರಗಳ ಕೋರಿಕೆಗಳನ್ನು ಪರಿಗಣಿಸಿ ಮುನ್ನೆಚ್ಚರಿಕಾ ಕ್ರಮಕ್ಕಾಗಿ 2026ನೇ ಹೊಸ ವರ್ಷ ಆಚರಣೆ ಪ್ರಯುಕ್ತ ನಂದಿಗಿರಿಧಾಮಕ್ಕೆ ಮುಂಗಡವಾಗಿ ಅತಿಥಿ ಕೊಠಡಿಗಳನ್ನು ಕಾಯ್ದಿರಿಸಿರುವ

--2

ಪ್ರವಾಸಿಗರನ್ನು ಹೊರತುಪಡಿಸಿ ಪ್ರವಾಸಿಗರಿಗೆ ಮತ್ತು ವಾಹನಗಳ ಪ್ರವೇಶವನ್ನು ನಿಷೇಧಿಸುವುದು ಸೂಕ್ತವೆಂದು ಮನಗಂಡು ಈ ಕೆಳಕಂಡಂತೆ ಆದೇಶಿಸಿದ್ದೇನೆ.

**ಆದೇಶ ಕ್ರಮಾಂಕ: ಎಂ.ಎ.ಜಿ(1)/ಸಿ.ಆರ್/382/2025-26, ಚಿಕ್ಕಬಳ್ಳಾಪುರ ಜಿಲ್ಲೆ, ದಿನಾಂಕ: 29/12/2025.**

ಮೇಲಿನ ಪ್ರಸ್ತಾನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ 2026ರ ಹೊಸ ವರ್ಷ ಆಚರಣೆಯ ಸಲುವಾಗಿ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಚಿಕ್ಕಬಳ್ಳಾಪುರ ತಾಲ್ಲೂಕು, ನಂದಿ ಹೋಬಳಿಯ ಪ್ರಸಿದ್ಧ ಪ್ರವಾಸಿ ತಾಣವಾದ ನಂದಿಗಿರಿಧಾಮಕ್ಕೆ ಮುಂಗಡವಾಗಿ ಕೊಠಡಿಗಳನ್ನು ಕಾಯ್ದಿರಿಸಿರುವ ಪ್ರವಾಸಿಗರನ್ನು ಹೊರತುಪಡಿಸಿ **ದಿನಾಂಕ: 31/12/2025ರ ಮಧ್ಯಾಹ್ನ 2:00 ಗಂಟೆಯಿಂದ ದಿನಾಂಕ: 01/01/2026ರ ಬೆಳಿಗ್ಗೆ 10:00 ಗಂಟೆಯವರೆಗೆ** ಸಾರ್ವಜನಿಕರ/ಪ್ರವಾಸಿಗರ ಪ್ರವೇಶವನ್ನು ನಿಷೇಧಿಸಿ ಆದೇಶಿಸಿದೆ.

**ಈ ಆದೇಶವನ್ನು ದಿನಾಂಕ: 29/12/2025ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮೊಹರಿನೊಂದಿಗೆ ಹೊರಡಿಸಲಾಗಿದೆ.**

29.12.25

**ರವೀಂದ್ರ ಪಿ.ಎನ್, ಭಾ.ಆ.ಸೇ.,**
**ಜಿಲ್ಲಾಧಿಕಾರಿ**
**ಹಾಗೂ ಜಿಲ್ಲಾ ದಂಡಾಧಿಕಾರಿ,**
**ಚಿಕ್ಕಬಳ್ಳಾಪುರ ಜಿಲ್ಲೆ.**

ಪ್ರತಿಯನ್ನು:-

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ, ಯಶವಂತಪುರ ವೃತ್ತ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಪೊಲೀಸ್ ಅಧೀಕ್ಷಕರು, ಚಿಕ್ಕಬಳ್ಳಾಪುರ ಜಿಲ್ಲೆ ರವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಉಪವಿಭಾಗಾಧಿಕಾರಿಗಳು, ಚಿಕ್ಕಬಳ್ಳಾಪುರ ಉಪವಿಭಾಗ ರವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಪೊಲೀಸ್ ಉಪ-ಅಧೀಕ್ಷಕರು, ಚಿಕ್ಕಬಳ್ಳಾಪುರ ವಿಭಾಗ, ಚಿಕ್ಕಬಳ್ಳಾಪುರ ರವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
5. ತಹಶೀಲ್ದಾರ್, ಚಿಕ್ಕಬಳ್ಳಾಪುರ ತಾಲ್ಲೂಕು ರವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
6. ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಚಿಕ್ಕಬಳ್ಳಾಪುರ ರವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
7. ವಿಶೇಷಾಧಿಕಾರಿಗಳು, ತೋಟಗಾರಿಕೆ ಇಲಾಖೆ, ನಂದಿಗಿರಿಧಾಮ ರವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
8. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ ಇವರಿಗೆ ಕಳುಹಿಸುತ್ತಾ, ಈ ಆದೇಶವನ್ನು ಜಿಲ್ಲೆಯ ದೃಶ್ಯ ಮತ್ತು ಪತ್ರಿಕೆ ಮಾಧ್ಯಮಗಳಲ್ಲಿ ಉಚಿತವಾಗಿ ಪ್ರಚಾರ ಮಾಡುವಂತೆ ತಿಳಿಸಿದೆ.